ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ,
ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-560023

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/41/2021-22 ದಿನಾಂಕ:13.05.2021

## ಸುತ್ತೋಲೆ

**ವಿಷಯ:** ರಾಜ್ಯದಲ್ಲಿ ಲಭ್ಯವಿರುವ ಲಸಿಕೆಗಳನ್ನು ಎರಡನೇ ಡೋಸ್ ಲಸಿಕಾಕರಣಕ್ಕಾಗಿ ಉಪಯೋಗಿಸುವ ಕುರಿತು.

**ಉಲ್ಲೇಖ** ಕಡತ ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/86/2020-21 ರಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಗಳು,ಕರ್ನಾಟಕ ಸರ್ಕಾರ ರವರ ಅನುಮೋದನೆ.

*******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಆರೋಗ್ಯ ಕಾರ್ಯಕರ್ತರಿಗೆ, ಮುಂಚೂಣಿ ಕಾರ್ಯಕರ್ತರಿಗೆ, 18 ರಿಂದ 44 ಹಾಗೂ 45 ವರ್ಷ ಮೇಲ್ಪಟ್ಟವರಿಗೆ ಕೋವಿಡ್ ಲಸಿಕಾಕರಣವನ್ನು ನಡೆಸಲಾಗುತ್ತಿದ್ದೆ. ಕೋವಿಡ್ ಲಸಿಕೆಯ ಮೊದಲನೇ ಡೋಸ್ ಪಡೆದ ಅನೇಕ ಫಲಾನುಭವಿಗಳು ಎರಡನೇ ಡೋಸ್ ಲಸಿಕೆ ಪಡೆಯಬೇಕಾಗಿದೆ.

**ಈ ಹಿನ್ನೆಲೆಯಲ್ಲಿ,**

- ದಿನಾಂಕ:07.05.2021 ರಿಂದ ರಾಜ್ಯ ಸರ್ಕಾರವು ಭಾರತ ಸರ್ಕಾರದಿಂದ 45+ ವಯೋಮಾನದವರ ಲಸಿಕಾಕರಣಕ್ಕಾಗಿ ಹಂಚಿಕೆಯಾದ ಲಸಿಕೆಗಳನ್ನು 2ನೇಯ ಡೋಸ್ ಪಡೆಯಲು ಬಾಕಿ ಇರುವ ಫಲಾನುಭವಿಗಳ ಲಸಿಕಾಕರಣಕ್ಕೆ ಮಾತ್ರ ಬಳಸಲು ನಿರ್ಧರಿಸಿರುತ್ತದೆ.
- ರಾಜ್ಯ ಸರ್ಕಾರವು ನೇರವಾಗಿ 18 ರಿಂದ 44 ವರ್ಷದ ವಯೋಮಾನದ ಫಲಾನುಭವಿಗಳ ಲಸಿಕಾಕರಣಕ್ಕೆ ಖರೀದಿಸಿದ ಪೂರ್ಣ ದಾಸ್ತಾನನ್ನು ಸಹ 2ನೆಯ ಡೋಸ್ ಪಡೆಯಲು ಬಾಕಿ ಇರುವ ಫಲಾನುಭವಿಗಳ ಬಳಕೆಗೆ ವಿನಿಯೋಗಿಸಲು ನಿರ್ಧರಿಸಿದೆ.
- ಆದ್ದರಿಂದ ರಾಜ್ಯದಲ್ಲಿ ಇರುವ ಎಲ್ಲಾ ಲಸಿಕೆಗಳ (ಕೇಂದ್ರ ಸರ್ಕಾರದಿಂದ ಒದಗಿಸಲಾದ ಹಾಗೂ ರಾಜ್ಯ ಸರ್ಕಾರದಿಂದ ನೇರವಾಗಿ ಖರೀದಿಸಿದ) ಪೂರ್ಣದಾಸ್ತಾನನ್ನು **2ನೇ ಯ ಡೋಸ್ ಪಡೆಯಲು ಬಾಕಿ ಇರುವ ಫಲಾನುಭವಿಗಳ ಲಸಿಕಾಕರಣಕ್ಕೆ ಮಾತ್ರ ಬಳಸಲು ನಿರ್ಧರಿಸಿರುತ್ತದೆ.**
- **ಈ ಸಂಬಂಧ 18 ರಿಂದ 44 ವರ್ಷ ವಯೋಮಾನದವರ ಕೋವಿಡ್ ಲಸಿಕಾಕರಣವನ್ನು (ಈಗಾಗಲೇ ಲಸಿಕೆಗಾಗಿ ಸಮಯ ನಿಗಧಿಪಡಿಸಿಕೊಂಡವರೂ ಸೇರಿದಂತೆ) ದಿನಾಂಕ 14.05.2021 ರಿಂದ ಮುಂದಿನ ಆದೇಶದ ವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಸಲಾಗಿದೆ** ಆದರೆ ಮೊದಲನೇ ಡೋಸ್ ಪಡೆದ 18 ರಿಂದ 44 ವರ್ಷದ ವಯೋಮಾನದ ಆರೋಗ್ಯ ಕಾರ್ಯಕರ್ತರು ಮತ್ತು ಮುಂಚೂಣಿ ಕಾರ್ಯಕರ್ತರು 2ನೇ ಡೋಸ್ ಲಸಿಕೆ ಪಡೆಯಲು ಅರ್ಹರಿದ್ದರೆ ಅಂತಹ ಫಲಾನುಭವಿಗಳು 2ನೇ ಡೋಸ್ ಲಸಿಕೆ ಪಡೆಯಬಹುದು.
- ಎರಡನೇ ಡೋಸ್ ಲಸಿಕೆ ನೀಡುವ ಸಮಯದಲ್ಲಿ ಜಿಲ್ಲೆಗಳು ಕೋವಿಶೀಲ್ಡ್ ಮೊದಲನೇ ಡೋಸ್ ಪಡೆದು 8 ವಾರಗಳನ್ನು ಪೂರ್ಣಗೊಳಿಸಿರುವ ಮತ್ತು ಕೋವ್ಯಾಕ್ಸಿನ್ ಮೊದಲನೇ ಡೋಸ್ ಪಡೆದು 6 ವಾರಗಳನ್ನು ಪೂರ್ಣಗೊಳಿಸಿರುವ ಫಲಾನುಭವಿಗಳಿಗೆ ಮೊದಲು ಲಸಿಕೆ ನೀಡುವುದು.

ಈ ಆದೇಶವು ಕೋವಿಡ್ ಲಸಿಕಾಕರಣ ನಡೆಸುತ್ತಿರುವ ಎಲ್ಲಾ ಸರ್ಕಾರಿ ಕೋವಿಡ್ ಲಸಿಕಾ ಕೇಂದ್ರಗಳಿಗೆ ಅನ್ವಯಿಸುತ್ತದೆ

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ
ಬೆಂಗಳೂರು

**ಇವರಿಗೆ,**

1. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ,
2. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ**

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು(ಸಾರ್ವಜನಿಕ ಆರೋಗ್ಯ) ಬಿಬಿಎಂಪಿ.
3. ಎಲ್ಲಾ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳು.
4. ಲಸಿಕಾಧಿಕಾರಿಗಳು, ಬಿಬಿಎಂಪಿ

**ಪ್ರತಿಯನ್ನು ಮಾಹಿತಿಗಾಗಿ,**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
2. ಮಾನ್ಯ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾ ಸೇವೆಗಳು, ಬೆಂಗಳೂರು.
4. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
6. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
7. ಯೋಜನಾ ನಿರ್ದೇಶಕರು(ಆರ್‌ಸಿಹೆಚ್) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
8. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
10. ಕಛೇರಿ ಪ್ರತಿ.